# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **336** |
| ಉತ್ತರಿಸಬೇಕಾದ ದಿನಾಂಕ | : | 03.02.2021 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ವಸತಿ ಇಲಾಖೆಯ ವಿವಿಧ ಯೋಜನೆಗಳಡಿ ಹಂಚಿಕೆ ಮಾಡುವ ಮನೆಗಳನ್ನು ಪಡೆಯಲು ನಿಗಧಿಪಡಿಸಿರುವ ಮಾನದಂಡಗಳೇನು ; ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಕಳೆದ 3 ವರ್ಷಗಳಲ್ಲಿ ಹಂಚಿಕೆಯಾದ ಮನೆಗಳೆಷ್ಟು ; ಈ ಮನೆಗಳನ್ನು ಪಡೆದಿರುವ ಫಲಾನುಭವಿಗಳೆಷ್ಟು ; (ಫಲಾನುಭವಿ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ,ಮತ್ತು ಜಾತಿ ವಿವರ ನೀಡುವುದು) | ವಸತಿ ಇಲಾಖೆಯ ವಿವಿಧ ಗ್ರಾಮೀಣ ಯೋಜನೆಗಳಡಿ ಹಂಚಿಕೆ ಮಾಡುವ ಮನೆಗಳನ್ನು ಪಡೆಯಲು ನಿಗಧಿಪಡಿಸಿರುವ ಮಾನದಂಡಗಳನ್ನು ಮತ್ತು ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ) ಯಡಿ ಫಲಾನುಭವಿಗಳನ್ನು ಗುರುತಿಸಲು/ ಆಯ್ಕೆ ಮಾಡುವ ಮಾನದಂಡಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.<br><br>ಹಾಸನ ಜಿಲ್ಲೆಯಲ್ಲಿ 2017-18 ನೇ ಸಾಲಿನಿಂದ 2019-20 ನೇ ಸಾಲಿನವರೆಗೆ ವಿವಿಧ ವಸತಿ ಯೋಜನೆಯಡಿ ಒಟ್ಟು 21420 ಮನೆಗಳನ್ನು ಮಂಜೂರು ಮಾಡಿ ಫಲಾನುಭವಿಗಳಿಗೆ ಕಾಮಗಾರಿ ಆದೇಶ ನೀಡಲಾಗಿದೆ.<br><br>ಫಲಾನುಭವಿವಾರು ಮತ್ತು ಗ್ರಾಮವಾರು ವಿವರವನ್ನು ಅನುಬಂಧ 1 ರಲ್ಲಿ ಒದಗಿಸಲಾಗಿದೆ. |
| (ಆ) | ಹಂಚಿಕೆಯಾಗಿರುವ ಮನೆಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ; ಮಂಜೂರಾಗದೇ ಬಾಕಿ ಉಳಿದಿರುವ ಅನುದಾನವೆಷ್ಟು ; (ಫಲಾನುಭವಿ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ,ಮತ್ತು ಜಾತಿ ವಿವರ ನೀಡುವುದು) | ಮೇಲೆ ತಿಳಿಸಿದ ಹಂಚಿಕೆಯಾದ ಮನೆಗಳಿಗೆ ಒಟ್ಟು ರೂ.137.08 ಕೋಟಿಗಳನ್ನು ಜಿ.ಪಿ.ಎಸ್ ಆಧಾರಿತ ಭೌತಿಕ ಪ್ರಗತಿಗನುಗುಣವಾಗಿ ಫಲಾನುಭವಿಗಳಿಗೆ ಬಿಡುಗಡೆ ಮಾಡಲಾಗಿದೆ.<br><br>ಅನುದಾನ ಬಿಡುಗಡೆಯಾಗಿರುವ ಫಲಾನುಭವಿ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿ ವಿವರಗಳನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.<br><br>ಪ್ರಸ್ತುತ ಭೌತಿಕ ಪ್ರಗತಿಗೆ ಎದುರಾಗಿ ವಿಜಿಲ್ ಆ್ಯಪ್ ಮೂಲಕ ಪರಿಶೀಲಿಸಲಾದ ಯಾವುದೇ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡಲು ಬಾಕಿ ಇರುವುದಿಲ್ಲ. |
| (ಇ) | ಹಾಸನ ಜಿಲ್ಲೆಯಲ್ಲಿರುವ ನಿರ್ವಸತಿಕರ ಸಂಖ್ಯೆ ಎಷ್ಟು ; ಈ ನಿರ್ವಸತಿಕರಿಗೆ ಯಾವ ಕಾಲಮಿತಿಯೊಳಗೆ ವಸತಿ ಕಲ್ಪಿಸಲಾಗುವುದು ? (ನಿರ್ವಸತಿಕರ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ,ಮತ್ತು ಜಾತಿವಾರು ಮಾಹಿತಿಯೊಂದಿಗೆ | 2018ರ ವಸತಿ/ನಿವೇಶನ ರಹಿತರ ಸಮೀಕ್ಷೆಯ ಪ್ರಕಾರ ಹಾಸನ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಒಟ್ಟು 57309 ವಸತಿ ರಹಿತರು ಕಂಡು ಬಂದಿರುತ್ತಾರೆ.<br><br>ಫಲಾನುಭವಿ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಾತಿ ವಿವರಗಳನ್ನು ಅನುಬಂಧ-3 ರಲ್ಲಿ ಒದಗಿಸಲಾಗಿದೆ. |

| | | |
|---|---|---|
| | ವಿವರ ನೀಡುವುದು) | ವಸತಿ ರಹಿತರಿಗೆ ಸರ್ಕಾರವು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನಕ್ಕೆ ಅನುಗುಣವಾಗಿ ಎಲ್ಲಾ ವಸತಿ ರಹಿತರಿಗೆ ಆದ್ಯತೆ ಮೇರೆಗೆ ಮನೆಗಳನ್ನು ಮಂಜೂರು ಮಾಡಲು ಕ್ರಮ ವಹಿಸಲಾಗುವುದು. |

ಸಂಖ್ಯೆ :ವಇ 50 ಹೆಚ್‌ಎಎಂ 2021

(ವಿ. ಸೋಮಣ್ಣ)
ವಸತಿ ಸಚಿವರು